# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ :89

ಸದಸ್ಯರ ಹೆಸರು :ಶ್ರೀ ತಿಪ್ಪಣ್ಣಪ್ಪ ಕಮಕನೂರ

ಉತ್ತರಿಸಬೇಕಾದ ದಿನಾಂಕ :17.08.2026

ಉತ್ತರಿಸುವ ಸಚಿವರು :ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶೈಕ್ಷಣಿಕ ವರ್ಷ ಆರಂಭವಾಗಿದ್ದರೂ ಕಲ್ಯಾಣ ಕರ್ನಾಟಕ ಭಾಗದ 10 ಸಾವಿರಕ್ಕೂ ಹೆಚ್ಚು ಸರ್ಕಾರಿ ಶಾಲಾ ಕೊಠಡಿಗಳು ಅತ್ಯಂತ ಶಿಥಿಲಗೊಂಡು ಬೋಧನೆಗೆ ಅಸುರಕ್ಷಿತವಾಗಿದ್ದು, ಯಾವುದೇ ಕ್ಷಣದಲ್ಲಿ ಕೊಠಡಿಗಳು ಕುಸಿದು ಬೀಳಬಹುದು ಎಂಬ ಭಯದ ನೆರಳಿನಲ್ಲಿಯೇ ಮಕ್ಕಳು ಮತ್ತು ಶಿಕ್ಷಕರು ಪಾಠ ಮಾಡುವಂತಾ-ಗಿರುವುದು ನಿಜವೇ: | 2026-27ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಜಿಲ್ಲಾ ಹಂತದಲ್ಲಿ ಮತ್ತು ತಾಲ್ಲೂಕು ಹಂತದಲ್ಲಿ ತಂಡಗಳನ್ನು ರಚಿಸಿ ಜಿಲ್ಲಾ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಕಟ್ಟಡ ಸುರಕ್ಷತೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಮತ್ತು ಪಂಚಾಯತ್ ರಾಜ್ಯ ಇಂಜಿನಿಯರಿಂಗ್ ವಿಭಾಗದ ಅಭಿಯಂತರರಿಂದ ಕಟ್ಟಡಗಳ ವಸ್ತುಸ್ಥಿತಿ ಬಗ್ಗೆ ಪರಿಶೀಲಿಸಿ ವರದಿಯನ್ನು ಪಡೆದುಕೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ.<br><br>ಅದರಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ 8706 ಶಾಲಾ ಕೊಠಡಿಗಳು ಶಿಥಿಲಗೊಂಡಿರುವುದಾಗಿ ಗುರುತಿಸಲಾಗಿದ್ದು, ಸರ್ಕಾರಿ ಶಾಲೆಗಳಲ್ಲಿ ಗುರುತಿಸಲಾಗಿರುವ ಅಸುರಕ್ಷಿತ ಶಾಲಾ ಕೊಠಡಿಗಳಲ್ಲಿ ಯಾವುದೇ ಕಾರಣಕ್ಕೂ ಬೋಧನೆ ನಡೆಸದಂತೆ, ಪರ್ಯಾಯ ಸುರಕ್ಷಿತ ಕೊಠಡಿಗಳು ಅಥವಾ ಸ್ಥಳೀಯ ಲಭ್ಯವಿರುವ ಸುರಕ್ಷಿತ ಕಟ್ಟಡಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಹಾಗೂ ಶಾಲಾ ಮುಖ್ಯ ಶಿಕ್ಷಕರಿಗೆ ಈಗಾಗಲೇ ಸ್ಪಷ್ಟ ನಿರ್ದೇಶನ ನೀಡಿ ಅದರಂತೆ ಕ್ರಮವಹಿಸಿರುವುದರಿಂದ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಭಯದ ನೆರಳಿನಲ್ಲಿ ಪಾಠ ಮಾಡುವ ಪರಿಸ್ಥಿತಿ ಇರುವುದಿಲ್ಲ. |

| | | |
|---|---|---|
| ಆ) | ಪತ್ರಿಕಾ ವರದಿಯ ಅಧಿಕೃತ ಅಂಕಿ-ಅಂಶಗಳ ಪ್ರಕಾರ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಲ್ಲಿ ಒಟ್ಟು 10,494 ಶಾಲಾ ಕೊಠಡಿಗಳು ಬೋಧನೆಗೆ ಸೂಕ್ತವಲ್ಲದ ಶಿಥಿಲಾವಸ್ಥೆಯಲ್ಲವೆ ಎಂದು ಗುರುತಿಸಿರುವುದು ನಿಜವೇ; ಈ ಪೈಕಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕೊಠಡಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆ (PWD) ಹಾಗೂ ಪಂಚಾಯತ್ ರಾಜ್ ಎಂಜಿನಿಯರಿಂಗ್ (PRED) ಇಲಾಖೆಯವರಿಂದ ನೀಡಲಾದ ಕಟ್ಟಡ ಸುರಕ್ಷತಾ ಪ್ರಮಾಣ ಪತ್ರದಂತೆ ಗುರುತಿಸಲಾದ ಶಿಥಿಲಗೊಂಡಿರುವ ಶಾಲಾ ಕೊಠಡಿಗಳ ಸಂಖ್ಯೆ 8706 ಇರುತ್ತದೆ. ಜಿಲ್ಲಾವಾರು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿವರವನ್ನು **ಅನುಬಂಧ-1** ರಲ್ಲಿ ಲಗತ್ತಿಸಲಾಗಿದೆ. |
| ಇ) | ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತ್ಯಂತ ಹೆಚ್ಚು ಅಂದರೆ ಕಲಬುರಗಿ ಜಿಲ್ಲೆಯೊಂದರಲ್ಲೇ 2.407 ಕೊಠಡಿಗಳು ಹಾಗೂ ಬೀದರ್ ಜಿಲ್ಲೆಯಲ್ಲಿ 1.016 ಕೊಠಡಿಗಳು ಶಿಥಿಲಗೊಂಡಿರುವುದು ನಿಜವೇ; ಶೈಕ್ಷಣಿಕವಾಗಿ ಹಿಂದುಳಿದಿರುವ ಈ ಪ್ರದೇಶದಲ್ಲಿ ಉತ್ತಮ ಕೊಠಡಿಗಳಿಲ್ಲದೆ ಮುಖ್ಯ ಶಿಕ್ಷಕರು ಅನಿವಾರ್ಯವಾಗಿ ಅದೇ ಮುರುಕಲು ಕೊಠಡಿಗಳಲ್ಲೇ ಪಾಠ ನಡೆಸುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕಲಬುರಗಿ ಜಿಲ್ಲೆಯಲ್ಲಿ 2334 ಕೊಠಡಿಗಳು ಹಾಗೂ ಬೀದರ್ ಜಿಲ್ಲೆಯಲ್ಲಿ 1315 ಕೊಠಡಿಗಳು ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಗುರುತಿಸಲಾಗಿರುವ ಒಟ್ಟು 8706 ಶಿಥಿಲ ಕೊಠಡಿಗಳನ್ನು ಶೈಕ್ಷಣಿಕ ಬಳಕೆಯಿಂದ ಸಂಪೂರ್ಣವಾಗಿ ತಡೆಯಲು ಈ ಕೆಳಗಿನ ತುರ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ.<br>1. ಕಟ್ಟಡ ಸುರಕ್ಷತಾ ಸಮೀಕ್ಷೆ ನಂತರ ನೀಡಿದ ಪ್ರಮಾಣ ಪತ್ರದ ಆಧಾರದ ಮೇರೆಗೆ ಗುರುತಿಸಲಾದ ಅಸುರಕ್ಷಿತ/ಶೀಥಿಲ ಕೊಠಡಿಗಳ ಪೈಕಿ ವಿದ್ಯಾರ್ಥಿ- ತರಗತಿ ಕೊಠಡಿ ಅನುಪಾತದನ್ವಯ (Student-classroom ratio) ಅವಶ್ಯಕವಿರುವ ಕೊಠಡಿಗಳ ದುರಸ್ತಿ/ ಮರು ನಿರ್ಮಾಣಕ್ಕಾಗಿ ಅಗತ್ಯತೆ ಹಾಗೂ ಅನುದಾನದ ಲಭ್ಯತೆಯನ್ನು ಆಧರಿಸಿ ಕ್ರಿಯಾ ಯೋಜನೆ ಸಿದ್ಧ ಪಡಿಲಾಗುತ್ತಿದೆ.<br>2. ಶಿಥಿಲಗೊಂಡಿರುವ ಅಪಾಯಕಾರಿ ಕೊಠಡಿಗಳಲ್ಲಿ ಯಾವುದೇ ಕಾರಣಕ್ಕೂ ಪಾಠ ನಡೆಸದಂತೆ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಹಾಗೂ ಉಪ ನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ ಇವರುಗಳ ಮೂಲಕ ಶಾಲೆಗಳಿಗೆ ಸ್ಪಷ್ಟ ನಿರ್ದೇಶನ ನೀಡಲಾಗಿದೆ.<br>3. ಸರ್ಕಾರಿ ಶಾಲೆಗಳಲ್ಲಿ ಸುರಕ್ಷಿತ ಕೊಠಡಿಗಳಲ್ಲಿ ಮಾತ್ರ ತರಗತಿ ನಿರ್ವಹಣೆ ಮಾಡಲಾಗುತ್ತಿದೆ. |

| | | |
|---|---|---|
| ಈ) | ಈ ಶಿಥಿಲ ಕೊಠಡಿಗಳ ದುರಸ್ತಿಗೆ ಬೇಸಿಗೆ ರಜೆಯ ಅವಧಿಯಲ್ಲಿ ಮುಂದಾಗದೆ. ಈಗ ಮಳೆಗಾಲ ಆರಂಭವಾದ ನಂತರವೂ ಯಾವುದೇ ಮುನ್ನೆಚ್ಚರಿಕಾ ಯೋಜನೆ (Plan) ಇಲ್ಲದೆ ನಿರ್ಲಕ್ಷ್ಯ ವಹಿಸಿರಲು ಕಾರಣಗಳೇನು: ಮಳೆಗೆ ಕೊಠಡಿಗಳು ಸೋರಿದರೆ ಅಥವಾ ಕುಸಿದು ಬಿದ್ದು ಅನಾಹುತಗಳಾದರೆ ಅದಕ್ಕೆ ಯಾರು ಜವಾಬ್ದಾರರು: | ಶಾಲಾ ಪ್ರಾರಂಭೋತ್ಸವಕ್ಕೆ ಮುನ್ನವೇ ಎಲ್ಲಾ ಶಾಲೆಗಳ ಕಟ್ಟಡ ಸುರಕ್ಷತೆಯನ್ನು ಪರಿಶೀಲಿಸಲು ಹಾಗೂ ಮುನ್ನೆಚ್ಚರಿಕೆಯಾಗಿ ಶಿಥಿಲ ಕೊಠಡಿಗಳ ಬಳಕೆಯನ್ನು ಕಡ್ಡಾಯವಾಗಿ ನಿಷೇಧಿಸಲಾಗಿದ್ದು, ಮಕ್ಕಳ ಸುರಕ್ಷತೆಗೆ ಪ್ರಮುಖ ಆದ್ಯತೆ ನೀಡಲಾಗಿದೆ.<br>ಶಾಲಾ ಮಕ್ಕಳ ಸುರಕ್ಷತೆಯಲ್ಲಿ ಲೋಪ ಎಸಗುವ ಅಧಿಕಾರಿಗಳು/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮವಹಿಸಲು ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. |
| ಉ) | ಕಲಬುರಗಿ ಡಿಡಿಪಿಐ ಅವರು "ಬೋಧನೆಗೆ ಸೂಕ್ತವಲ್ಲದ ಕೊಠಡಿಗಳನ್ನು ಗುರುತಿಸಿ ಉತ್ತಮ ಕೊಠಡಿಗಳಲ್ಲೇ ಬೋಧಿಸಲು ಹಾಗೂ ಪಿಆರ್‌ಇಡಿ. ಪಿಡಬ್ಲ್ಯೂಡಿ ಅಧಿಕಾರಿಗಳಿಂದ ವರದಿ ಕೇಳಲಾಗಿದೆ" ಎಂದು ಹೇಳಿರುವುದು ನಿಜವೇ: ಕೇವಲ ವರದಿ ಕೇಳುವುದರಲ್ಲೇ ಕಾಲಹರಣ ಮಾಡದೆ. ಕಲ್ಯಾಣ ಕರ್ನಾಟಕದ ಈ 10.494 ಅಸುರಕ್ಷಿತ ಕೊಠಡಿಗಳ ದುರಸ್ತಿ ಹಾಗೂ ಮರುನಿರ್ಮಾಣಕ್ಕಾಗಿ ಸರ್ಕಾರ ವಿಶೇಷ ಪ್ಯಾಕೇಜ್ ಅಡಿ ಕಾಯ್ದಿರಿಸಿರುವ ಅನುದಾನ ಎಷ್ಟು ಮತ್ತು ಯಾವ ಗಡುವಿನೊಳಗೆ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು? | 2026-27ನೇ ಸಾಲಿನ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಜಿಲ್ಲಾ ಹಂತದಲ್ಲಿ ಮತ್ತು ತಾಲ್ಲೂಕು ಹಂತದಲ್ಲಿ ತಂಡಗಳನ್ನು ರಚಿಸಿ ಜಿಲ್ಲಾ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಕಟ್ಟಡ ಸುರಕ್ಷತೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಮತ್ತು ಪಂಚಾಯತ್ ರಾಜ್ಯ ಇಂಜಿನಿಯರಿಂಗ್ ವಿಭಾಗದ ಅಭಿಯಂತರರಿಂದ ಕಟ್ಟಡಗಳ ವಸ್ತುಸ್ಥಿತಿ ಬಗ್ಗೆ ಪರಿಶೀಲಿಸಿ ವರದಿಯನ್ನು ಪಡೆದುಕೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ. ಅದರಂತೆ ಜಿಲ್ಲಾ ಹಂತದಲ್ಲಿ ಕ್ರಮವಹಿಸಲಾಗಿರುತ್ತದೆ.<br>ಪ್ರತೀ ವರ್ಷ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ವ್ಯಾಸಂಗ ಮಾಡುವ ಮಕ್ಕಳ ಹಾಜರಾತಿಗೆ ಅನುಗುಣವಾಗಿ ಹಾಗೂ ಅವಶ್ಯವಿರುವ ಮೂಲಸೌಲಭ್ಯಗಳ ಬಗ್ಗೆ ಸಂಬಂಧಪಟ್ಟ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಆದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ನೀಡಿ ಮೂಲಸೌಲಭ್ಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.<br>ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆ ಹಾಗೂ ಪಿ.ಎಂ ಶ್ರೀ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು |

| | | |
|---|---|---|
| | | ಆಧರಿಸಿ ಅರ್ಹತೆ ಮತ್ತು ಅದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ನೀಡಿ ಮೂಲಸೌಲಭ್ಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ.<br><br>ಇದರ ಹೊರತಾಗಿ ಕಲ್ಯಾಣ ಕರ್ನಾಟಕದ ಭಾಗದ ಸರ್ಕಾರಿ ಶಾಲೆಗಳಲ್ಲಿನ ಅಸುರಕ್ಷಿತ ಶಾಲಾ ಕೊಠಡಿಗಳ ದುರಸ್ತಿ ಹಾಗೂ ಮರುನಿರ್ಮಾಣವನ್ನು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನ ಹಾಗೂ ಗಣಿಬಾಧಿತ ಪ್ರದೇಶದ ಜಿಲ್ಲೆಗಳಲ್ಲಿ CEPMIZ ಯೋಜನೆಯ ಅನುದಾನದಿಂದ ಜಿಲ್ಲೆಗಳಿಂದ ಬರುವ ಪ್ರಸ್ತಾವನೆಗಳನ್ನು ಆಧರಿಸಿ ಅರ್ಹತೆ ಮತ್ತು ಅದ್ಯತೆಯಂತೆ ಕ್ರಿಯಾಯೋಜನೆಯನ್ನು ರೂಪಿಸಿ, ಅನುದಾನದ ಲಭ್ಯತೆಗೆ ಅನುಗುಣವಾಗಿ ಅನುಮೋದನೆ ಪಡೆದು ಮೂಲಸೌಲಭ್ಯಗಳನ್ನು ಒದಗಿಸಿ ಕೊರತೆಯನ್ನು ನೀಗಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ಇಪಿ 222 ಯೋಸಕ 2026

(ಎಸ್. ಮಧು ಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

# ಅನುಬಂಧ -1

| ಕ್ರ ಸಂ | ಜಿಲ್ಲೆಯ ಹೆಸರು | ಪ್ರಾಥಮಿಕ ಶಾಲಾ ಕೊಠಡಿಗಳು | ಪ್ರೌಢಶಾಲಾ ಕೊಠಡಿಗಳು | ಒಟ್ಟು ಶಿಥಿಲ ಕೊಠಡಿಗಳು |
|---|---|---|---|---|
| 1 | ಬಳ್ಳಾರಿ | 654 | 102 | 756 |
| 2 | ಬೀದರ್ | 1142 | 173 | 1315 |
| 3 | ಕಲಬುರಗಿ | 1993 | 341 | 2334 |
| 4 | ಕೊಪ್ಪಳ | 858 | 178 | 1036 |
| 5 | ರಾಯಚೂರು | 628 | 111 | 739 |
| 6 | ವಿಜಯನಗರ | 911 | 164 | 1075 |
| 7 | ಯಾದಗಿರ | 1233 | 218 | 1451 |
| **ಒಟ್ಟು** | | **7419** | **1287** | **8706** |

ನಿರ್ದೇಶಕರು
ಅಪರ ಆಯುಕ್ತರ ಕಛೇರಿ
ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ